ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ
ದಿನಾಂಕ : DATE

ಬಜೆಟ್ ಅಧಿವೇಶನ | ಮಾ.4ರಿಂದ 31ರವರೆಗೆ ರಾಜ್ಯ ವಿಧಾನಮಂಡಲ ಅಧಿವೇಶನ । ಮೀಸಲು ಹೋರಾಟ, ಕಾವೇರಿ ವಿವಾದದ ಬಗ್ಗೆ ಚರ್ಚೆ ಸಾಧ್ಯತೆ

# ನಾಳೆಯಿಂದ ಅಧಿವೇಶನ, ಮಾ.8ಕ್ಕೆ ಬಜೆಟ್

• ಕನ್ನಡಪ್ರಭ ವಾರ್ತೆ ಬೆಂಗಳೂರು

ಕೊರೋನಾ ಹಾವಳಿಯಿಂದ ಹದಗೆಟ್ಟ ರಾಜ್ಯದಲ್ಲಿ ಆರ್ಥಿಕ ಚಟುವಟಿಕೆ ಸಹಜಸ್ಥಿತಿಗೆ ಬರುತ್ತಿರುವ ನಡುವೆ ವಿಧಾನಮಂಡಲದ ಬಜೆಟ್ ಅಧಿವೇಶನ ಮಾ.4ರಿಂದ 31ರವರೆಗೆ ನಡೆಯಲಿದ್ದು, ಮಾ.8ರಂದು ರಾಜ್ಯ ಬಜೆಟ್ ಮಂಡನೆಯಾಗಲಿದೆ.

ಅಧಿವೇಶನ ಪ್ರಮುಖವಾಗಿ ಬಜೆಟ್ ಮೇಲಿನ ಚರ್ಚೆ ಸೇರಿದಂತೆ ವಿವಿಧ ಕಲಾಪಗಳು ನಡೆಯಲಿವೆ. ಜತೆಗೆ ವಿವಿಧ ಸಮುದಾಯಗಳು ಮೀಸಲಾತಿ ಕೋರಿ ಇತ್ತೀಚೆಗೆ ನಡೆಸುತ್ತಿರುವ ಹೋರಾಟ, ಕಾವೇರಿ ನದಿಯ ಹೆಚ್ಚುವರಿ ನೀರು ಬಳಸಲು ಮುಂದಾಗಿರುವ ತಮಿಳುನಾಡು ಕ್ರಮ, ಸರ್ಕಾರದ ವಿರುದ್ಧ ಬಿಜೆಪಿ ಶಾಸಕರೇ ಮಾಡುತ್ತಿರುವ ಟೀಕೆಗಳು ಮೊದಲಾದ ಚರ್ಚೆಗೆ ಕಾರಣವಾಗುವ ಸಾಧ್ಯತೆ ಇದೆ. ವಿಶೇಷವಾಗಿ ಮೊದಲ ಎರಡು ದಿನಗಳ ಕಾಲ 'ಒಂದು ದೇಶ, ಒಂದು ಚುನಾವಣೆ' ಕುರಿತು ನಡೆಯುವ ಚರ್ಚೆ ವೇಳೆ ಸಹಜವಾಗಿ ಸಹಕಾರ 'ಪಕ್ಷಾಂತರ, ಚುನಾವಣೆ ವೆಚ್ಚ, ಮತದಾರರಿಗೆ ಒಡ್ಡುವ ಆಮಿಷ ಇತ್ಯಾದಿಗಳ ಬಗ್ಗೆ ಪ್ರಸ್ತಾಪವಾಗುವ ಸಂಭವವಿದೆ.

**19 ದಿನಗಳ ಕಾಲ ಕಲಾಪ:** ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಂಗಳವಾರ ಪ್ರತ್ಯೇಕವಾಗಿ ಪತ್ರಿಕಾಗೋಷ್ಠಿ ನಡೆಸಿ ಬಜೆಟ್ ಅಧಿವೇಶನದ ಕುರಿತು ಮಾಹಿತಿ ನೀಡಿದರು.

ಮಾ.4ರಂದು ಬೆಳಗ್ಗೆ 11 ಗಂಟೆಗೆ ಉಭಯ ಸದನಗಳು ಪ್ರಾರಂಭವಾಗಲಿವೆ. ಅಧಿವೇಶನದ ಮೊದಲ ಎರಡು ದಿನ 'ಒಂದು ದೇಶ, ಒಂದು ಚುನಾವಣೆ' ಕುರಿತು ವಿಸ್ತೃತವಾಗಿ ಚರ್ಚೆ ನಡೆಯಲಿದೆ. ರಜೆ ದಿನಗಳನ್ನು ಹೊರತುಪಡಿಸಿ 19 ದಿನಗಳ ಕಾಲ ಕಾರ್ಯಕಲಾಪ ಜರುಗಲಿದೆ ಎಂದು ಮಾಹಿತಿ ನೀಡಿದರು.

ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ಹಲವು ಸಂದರ್ಭದಲ್ಲಿ ಅನೇಕ ಗಣ್ಯರು ಒಂದು ದೇಶ, ಒಂದು ಚುನಾವಣೆ



ಕುರಿತು ಪ್ರಸ್ತಾಪಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಸಹ ಈ ವಿಷಯವನ್ನು ಜನತೆಯ ಮುಂದೆ ಚರ್ಚಿಸಲು ಹೇಳಿದ್ದಾರೆ. ಗುಜರಾತ್‌ನ ಕೆವಾಡಿಯಾದಲ್ಲಿ ನಡೆದ ಸಭಾಧ್ಯಕ್ಷರ ಸಮ್ಮೇಳನದಲ್ಲಿಯೂ ಪ್ರಧಾನಿಗಳು ಪ್ರಸ್ತಾಪ ಮಾಡಿದ್ದರು. ಹೀಗಾಗಿ ಸದನದಲ್ಲಿ ಚರ್ಚೆ ನಡೆಸಲಾಗುತ್ತಿದೆ. ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗೆ ಸಂಬಂಧಿಸಿ ಚರ್ಚಿಸಲಾಗುತ್ತಿದೆ. ಇತರೆ ಚುನಾವಣೆಗಳು ಇದರ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿದರು.

ಒಂದು ದೇಶ, ಒಂದು ಚುನಾವಣೆ ಕುರಿತು ಸದನದಲ್ಲಿ ಚರ್ಚೆ ಮಾತ್ರ ನಡೆಸಲಾಗುತ್ತದೆ. ಯಾವುದೇ ನಿರ್ಣಯ ಕೈಗೊಳ್ಳುವುದಿಲ್ಲ. ಲೋಕಸಭೆಗೆ ಚರ್ಚೆಯ ವಿವರಗಳನ್ನು ರವಾನಿಸಲಾಗುತ್ತದೆ. ಅಲ್ಲಿ ನಿರ್ಣಯ ಕೈಗೊಳ್ಳಲಾಗುತ್ತದೆ. ಇನ್ನುಳಿದಂತೆ ಪ್ರಶ್ನೋತ್ತರ ಅವಧಿ, ಶೂನ್ಯ ವೇಳೆ, ಗಮನ ಸೆಳೆಯುವುದು ಮತ್ತು ಬಜೆಟ್ ಮೇಲಿನ ಚರ್ಚೆ ನಡೆಯಲಿದೆ ಎಂದರು.

**ಶಾಸಕರಿಗೆ ತರಬೇತಿ ಕಾರ್ಯಾಗಾರ:** ಆಯವ್ಯಯ ಮಂಡನೆ ಹಿನ್ನೆಲೆಯಲ್ಲಿ 'ಆಯವ್ಯಯ ಮತ್ತು ರಾಜ್ಯ ಹಣಕಾಸು' ವಿಷಯ ಕುರಿತು ಉಭಯ ಸದನಗಳ ಸದಸ್ಯರಿಗೆ ಮಾ.3ರಂದು ತರಬೇತಿ ಕಾರ್ಯಾಗಾರ ಏರ್ಪಡಿಸಲಾಗಿದೆ. ನವದೆಹಲಿಯ ಪಿಆರ್‌ಎಸ್ ಶಾಸನ ಸಂಶೋಧನಾ ಸಂಸ್ಥೆ ಬೆಳಗ್ಗೆ 10-30ರಿಂದ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕಾರ್ಯಾಗಾರ ಏರ್ಪಡಿಸಿದ್ದು, ಎರಡು ಗೋಷ್ಠಿಗಳಲ್ಲಿ ತಜ್ಞರು ಭಾಷಣ ಮಾಡಲಿದ್ದಾರೆ.

## 3 ವಿಧೇಯಕ ಮಂಡನೆ

ವಿಧಾನಸಭೆಯಲ್ಲಿ ಮೂರು ವಿಧೇಯಕಗಳು ಮಂಡನೆಯಾಗಲಿದ್ದು, ಕರ್ನಾಟಕ ಪುರಸಭೆ ತಿದ್ದುಪಡಿ ವಿಧೇಯಕ, ಸ್ಟಾಂಪ್ ನೋಂದಣಿ ತಿದ್ದುಪಡಿ ವಿಧೇಯಕ ಮತ್ತು ಲೇವಾದೇವಿ ತಿದ್ದುಪಡಿ ವಿಧೇಯಕ ಮಂಡನೆಯಾಗಲಿದೆ ಎಂದು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಪ್ರಸ್ತುತ 3 ವಿಧೇಯಕ ಮಂಡನೆ ಕುರಿತು ಸರ್ಕಾರವು ಮಾಹಿತಿ ನೀಡಿದೆ. ಆದಷ್ಟು ಬೇಗ ಸರ್ಕಾರ ಸಹ ಮಂಡಿಸುವ ವಿಧೇಯಕ ಕುರಿತು ಮಾಹಿತಿ ನೀಡಬೇಕು. ಇದು ಚರ್ಚೆಗೆ ಅನುಕೂಲವಾಗಲಿದೆ ಎಂದರು.